# ವಿಡಿಐಟಿಯಲ್ಲಿ ಮಾತೃಭಾಷಾ ದಿನದ ಉಪನ್ಯಾಸ ಕಾರ್ಯಕ್ರಮ ಯಶಸ್ವಿ



**ಕೊಂಕಣವಾಹಿನಿ ನ್ಯೂಸ್,**

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ಕುರಿತಾಗಿ ಉಪನ್ಯಾಸ ಕಾರ್ಯಕ್ರಮವನ್ನು ಗುರುವಾರ ಆಯೋಜಿಸಲಾಗಿತ್ತು.

ಭಾರತೀಯ ತಂತ್ರಜ್ಞಾನ ಸಂಸ್ಥೆ ಧಾರವಾಡದ ಉಪನ್ಯಾಸಕರಾದ ಡಾ. ರಾಜಶೇಖರ್ ಭಟ್ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ಇತ್ತೀಚಿನ ದಿನಗಳಲ್ಲಿ ಕೈಗಾರಿಕೆಯ ಎಲ್ಲಾ ವಿಭಾಗದಲ್ಲೂ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ತಂತ್ರಜ್ಞಾನವನ್ನು ಬಳಕೆ ಮಾಡಲಾಗುತ್ತಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆಯ ಮೇಲೆ ಯೋಜನಾ ಕಾರ್ಯಗಳನ್ನು ಕೈಗೊಂಡಲ್ಲಿ ಆಳವಾದ ಪ್ರಾಯೋಗಿಕ ಜ್ಞಾನವನ್ನು ಹೊಂದಬಹುದು ಎಂದು ಹೇಳಿದರು. ಮಾತ್ರ ಭಾಷಾ ದಿನದ ಅಂಗವಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು, ಸಂಪನ್ಮೂಲ ವ್ಯಕ್ತಿಗಳು ಈ ತಂತ್ರಜ್ಞಾನದ ವಿವರಣೆಯನ್ನು ಸಂಪೂರ್ಣವಾಗಿ ಕನ್ನಡ ಭಾಷೆಯಲ್ಲಿ ನೀಡಿದ್ದು ವಿಶೇಷವಾಗಿತ್ತು.

ಕನ್ನಡ ಕಲ್ಪವೃಕ್ಷ ಸಂಘದ ಸಂಚಾಲಕಿ ಪ್ರೊ. ರೋಹಿಣಿ ಕಲ್ಲೂರ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ. ನವೀನ್ ಹಿರೇಮಠ ಸ್ವಾಗತಿಸಿ ವಂದಿಸಿದರು. ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಬೋಧಕ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಮಾತೃಭಾಷಾ ದಿನದ ಉಪನ್ಯಾಸ ಕಾರ್ಯಕ್ರಮ ಯಶಸ್ವಿ



ಹಳಿಯಾಳ: : ಕೆಎಲ್‌ಎಸ್ ವಿಡಿಐಟಿ ಹಳಿಯಾಳದಲ್ಲಿ ಕೃತಕ ಬುದ್ಧಿ ಮತ್ತೆ ಮತ್ತು ಯಂತ್ರ ಕಲಿಕೆ ಕುರಿತಾಗಿ ಉಪನ್ಯಾಸ ಕಾರ್ಯಕ್ರಮವನ್ನು ಫೆಬ್ರುವರಿ 20ರಂದು ಆಯೋಜಿಸಲಾಗಿತ್ತು. ಭಾರತೀಯ ತಂತ್ರಜ್ಞಾನ ಸಂಸ್ಥೆ ಧಾರವಾಡದ ಉಪನ್ಯಾಸಕರಾದ ಡಾ. ರಾಜಶೇಖರ್ ಭಟ್ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ಇತ್ತೀಚಿನ ದಿನಗಳಲ್ಲಿ ಕೈಗಾರಿಕೆಯ ಎಲ್ಲಾ ವಿಭಾಗದಲ್ಲೂ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ತಂತ್ರಜ್ಞಾನವನ್ನು ಬಳಕೆ ಮಾಡಲಾಗುತ್ತಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆಯ ಮೇಲೆ ಯೋಜನಾ ಕಾರ್ಯಗಳನ್ನು ಕೈಗೊಂಡಲ್ಲಿ ಆಳವಾದ ಪ್ರಾಯೋಗಿಕ ಜ್ಞಾನವನ್ನು ಹೊಂದಬಹುದು ಎಂದು ಹೇಳಿದರು. ಕೃತಕ ಬುದ್ಧಿ ಮತ್ತೆ ಕಾರ್ಯನಿರ್ವಹಿಸುವ ಅಲ್ಗೋರಿದಂ ಕುರಿತಾಗಿ ವಿವರಿಸಿದರು. ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ ತಂತ್ರಜ್ಞಾನದ ಚಾಟ್ ಜಿಪಿಟಿ ಯನ್ನು ಕಲಿಕೆಗೆ ಸಮರ್ಪಕವಾಗಿ ಬಳಸಿಕೊಳ್ಳಬೇಕೆಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಎ ಐ ಆಂಡ್ ಎಂ ಎಲ್ ನಂತಹ ನೂತನ ತಂತ್ರಜ್ಞಾನದ ಕುರಿತು ವಿದ್ಯಾರ್ಥಿಗಳು ಮಾಹಿತಿ ಹೊಂದಲು ಈ ಕಾರ್ಯಕ್ರಮವು ಸಹಕಾರಿಯಾಗಿದೆ ಎಂದು ಹೇಳಿದರು. ಮಾತ್ರ ಭಾಷಾ ದಿನದ ಅಂಗವಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು, ಸಂಪನ್ಮೂಲ ವ್ಯಕ್ತಿಗಳು ಈ ತಂತ್ರಜ್ಞಾನದ ವಿವರಣೆಯನ್ನು ಸಂಪೂರ್ಣವಾಗಿ ಕನ್ನಡ ಭಾಷೆಯಲ್ಲಿ ನೀಡಿದ್ದು ವಿಶೇಷವಾಗಿತ್ತು. ಕನ್ನಡ ಕಲ್ಪವೃಕ್ಷ ಸಂಘದ ಸಂಚಾಲಕಿ ಪ್ರೊ. ರೋಹಿಣಿ ಕಲ್ಲೂರ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ. ನವೀನ್ ಹಿರೇಮಠ ಸ್ವಾಗತಿಸಿ ವಂದಿಸಿದರು. ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಬೋಧಕ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಯಂತ್ರ ಕಲಿಕೆಯ ಮೇಲೆ ಯೋಜನಾ ಕಾರ್ಯ ಕೈಗೊಳ್ಳಿ

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದಲ್ಲಿ ಕೃತಕ ಬುದ್ಧಿ ಮತ್ತೆ ಮತ್ತು ಯಂತ್ರ ಕಲಿಕೆ ಕುರಿತಾಗಿ ಉಪನ್ಯಾಸಕಾರ್ಯಕ್ರಮವನ್ನು ಗುರುವಾರ



ಆಯೋಜಿಸಲಾಗಿತ್ತು. ಭಾರತೀಯ ತಂತ್ರಜ್ಞಾನ ಸಂಸ್ಥೆ ಧಾರವಾಡದ ಉಪನ್ಯಾಸಕ ಡಾ. ರಾಜಶೇಖರ್ ಭಟ್ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಕೈಗಾರಿಕೆಯ ಎಲ್ಲಾ ವಿಭಾಗದಲ್ಲೂ ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆ ತಂತ್ರಜ್ಞಾನವನ್ನು ಬಳಕೆ ಮಾಡಲಾಗುತ್ತಿದೆ. ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆಯ ಮೇಲೆ ಯೋಜನಾ ಕಾರ್ಯಗಳನ್ನು ಕೈಗೊಂಡಲ್ಲಿ ಆಳವಾದ ಪ್ರಾಯೋಗಿಕ ಜ್ಞಾನವನ್ನು ಹೊಂದಬಹುದು ಎಂದು ಹೇಳಿದರು. ಕೃತಕ ಬುದ್ಧಿ ಮತ್ತೆ ಕಾರ್ಯನಿರ್ವಹಿಸುವ ಅಲ್ಗೋರಿದಂ ಕುರಿತಾಗಿ ವಿವರಿಸಿದರು. ವಿದ್ಯಾರ್ಥಿಗಳು ಕೃತಕ ಬುದ್ಧಿಮತ್ತೆ ತಂತ್ರಜ್ಞಾನದ ಚಾಟ್ ಜಿಪಿಟಿಯನ್ನು ಕಲಿಕೆಗೆ ಸಮರ್ಪಕವಾಗಿ ಬಳಸಿಕೊಳ್ಳಬೇಕೆಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ, ಎಐ ಆ್ಯಂಡ್ ಎಂಎಲ್‌ನಂತಹ ನೂತನ ತಂತ್ರಜ್ಞಾನದ ಕುರಿತು ವಿದ್ಯಾರ್ಥಿಗಳು ಮಾಹಿತಿ ಹೊಂದಲು ಈ ಕಾರ್ಯಕ್ರಮವು ಸಹಕಾರಿಯಾಗಿದೆ ಎಂದು ಹೇಳಿದರು. ಮಾತ್ರ ಭಾಷಾ ದಿನದ ಅಂಗವಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು, ಸಂಪನ್ಮೂಲ ವ್ಯಕ್ತಿಗಳು ಈ ತಂತ್ರಜ್ಞಾನದ ವಿವರಣೆಯನ್ನು ಸಂಪೂರ್ಣವಾಗಿ ಕನ್ನಡ ಭಾಷೆಯಲ್ಲಿ ನೀಡಿದ್ದು ವಿಶೇಷವಾಗಿತ್ತು. ಕನ್ನಡ ಕಲ್ಪವೃಕ್ಷ ಸಂಘದ ಸಂಚಾಲಕಿ ಪ್ರೊ. ರೋಹಿಣಿ ಕಲ್ಲೂರ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ. ನವೀನ್ ಹಿರೇಮಠ ಸ್ವಾಗತಿಸಿ, ವಂದಿಸಿದರು. ಮಹಾವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ಬೋಧಕ ಸಿಬ್ಬಂದಿ ಉಪಸ್ಥಿತರಿದ್ದರು.